4. ಕ್ರೆಡಿಟ್ ಗ್ಯಾರಂಟಿ ಫಂಡ್‌ಟ್ರಸ್ಟ್ ಫಾರ್ ಸ್ಮಾಲ್ ಸ್ಕೇಲ್ ಇಂಡಸ್ಟ್ರೀಸ್.

5. ಕೈಗಾರಿಕೆಗಳ ಆಧುನೀಕರಣ ಮತ್ತು ತಾಂತ್ರಿಕ ಉನ್ನತೀಕರಣ ನಿಧಿ ಯೋಜನೆ.

6. ರೋಗಗ್ರಸ್ತ ಕೈಗಾರಿಕೆಗಳ ಪುನಃಶ್ಚೇತನಕ್ಕಾಗಿ ನೀಡುವ ಸವಲತ್ತುಗಳನ್ನು ಹೊಸ ಕೈಗಾರಿಕಾ ನೀತಿಯಲ್ಲಿ ಅಳವಡಿಸಲಾಗಿದೆ.

7. ಸಣ್ಣ ಕೈಗಾರಿಕೆಗಳ ಉತ್ಪನ್ನಗಳನ್ನು ಖರೀದಿಸಲು ಪ್ರತ್ಯೇಕ ನೀತಿ, ಇತ್ಯಾದಿಗಳು.

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಕಾತ್ರಿಕೇಹಾಳ್ ಗ್ರಾಮದಲ್ಲಿ ವಿದ್ಯಾರ್ಥಿನಿಲಯಗಳನ್ನು ತೆರೆಯುವುದು.

2004(2492)

ಶ್ರೀ ಸುರೇಶ್‌ಬಾಬು ಸಿ.ಬಿ.(ಚಿಕ್ಕನಾಯಕನಹಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಕಾತ್ರಿಕೇಹಾಳ್ ಗ್ರಾಮದಲ್ಲಿ ಗ್ರಾಮದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

ಇ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ದೊಡ್ಡ ಎಣ್ಣೆಗೆರೆ ಕ್ರಾಸ್ ಮತ್ತು ಕರಡಾಳು ಸಂತೆ ಮೈದಾನ (ಕಿಬ್ಬನಳ್ಳಿ, ಹೋಬಳಿ ತಿಪಟೂರು ತಾಲ್ಲೂಕು) ಗ್ರಾಮಗಳಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ಹಾಗಿದ್ದಲ್ಲಿ ಈ ವರ್ಷದ ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಇ) ಹೌದು

ಈ) ಆಯವ್ಯಯದ ಲಭ್ಯತೆ ಹಾಗೂ ಪದ್ಯಾರ್ಥಿನಿಲಯದ ಪ್ರಾರಂಭದ ಅವಶ್ಯಕತೆಯ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು.

ಚಿಕ್ಕನಾಯಕನಹಳ್ಳಿ ಪುರಸಭೆಯಲ್ಲಿ ಪೌರಕಾರ್ಮಿಕರನ್ನು ನೇಮಕ ಮಾಡುವುದು.

2005(2493)

ಶ್ರೀ ಸಿ.ಬಿ.ಸುರೇಶ್‌ಬಾಬು(ಚಿಕ್ಕನಾಯಕನಹಳ್ಳಿ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

1. ಚಿಕ್ಕನಾಯಕನಹಳ್ಳಿ ಪುರಸಭೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು?

2. ಹಾಗಿಲ್ಲದಿದ್ದಲ್ಲಿ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿ ಪೌರಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗಿದೆ?

3. ಹಾಗಿಲ್ಲದಿದ್ದಲ್ಲಿ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿ ಪೌರಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

1. 17 (ಹದಿನೇಳು)

2. ಇಲ್ಲ.

3. ಪುರಸಭೆಯವರು ಸ್ವಚ್ಛತಾ ಕೆಲಸವನ್ನು ಗುತ್ತಿಗೆ ಆಧಾರದ ಮೇಲೆ ನಿರ್ವಹಿಸಲು ಸರ್ಕಾರ ಸುತ್ತೋಲೆ ಸಂಖ್ಯೆ:ಪನಇ 168 ಜಿಇಎಲ್ 93 ದಿನಾಂಕ:19-11-93ರಲ್ಲಿ ನಿರ್ದೇಶನ ನೀಡಿದೆ.

ಬೆಳಗಾವಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದಿಂದ ಹಮ್ಮಿಕೊಂಡ ಯೋಜನೆಗಳು.